## ಶಿಡ್ಲಘಟ್ಟ ಕ್ಷೇತ್ರದಲ್ಲಿ ಕುಡಿಯುವ ನೀರಿನ ಸಮಸ್ಯೆ

**204 (262)**

**ಶ್ರೀ ವಿ. ಮುನಿಯಪ್ಪ (ಶಿಡ್ಲಘಟ್ಟ)**

### ಪ್ರಶ್ನೆ

ಅ) ಚಿಕ್ಕಬಳ್ಳಾಪುರ ಜಿಲ್ಲೆ ಶಿಡ್ಲಘಟ್ಟ ತಾಲ್ಲೂಕು ಶಿಡ್ಲಘಟ್ಟ ಕ್ಷೇತ್ರದಲ್ಲಿ ಕುಡಿಯುವ ನೀರಿನ ಸಮಸ್ಯೆ ಹೆಚ್ಚಾಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಶಿಡ್ಲಘಟ್ಟ ಕ್ಷೇತ್ರದಲ್ಲಿ ಕಳೆದ ಒಂದು ವರ್ಷದಿಂದ ಕುಡಿಯುವ ನೀರಿನ ಸಮಸ್ಯೆ ಪರಿಹರಿಸಲು ಎಷ್ಟು ಕೊಳವೆ ಬಾವಿಗಳನ್ನು ಕೊರೆಯಲಾಗಿದೆ; ಇದರಲ್ಲಿ ಎಷ್ಟು ಕೊರೆದ ಬಾವಿಗಳಿಗೆ ವಿದ್ಯುತ್ ಸಂಪರ್ಕ ಹಾಗೂ ಪಂಪು ಮೋಟರ್ ಅಳವಡಿಸಿ ನೀರು ಒದಗಿಸಿದ್ದೀರಿ?

**ಶ್ರೀ ಕೆ.ಎಸ್. ಈಶ್ವರಪ್ಪ (ಮಾನ್ಯ ಉಪ ಮುಖ್ಯಮಂತ್ರಿಗಳು)**

### ಉತ್ತರ

ಅ) ಬಂದಿದೆ.

ಆ) ಶಿಡ್ಲಘಟ್ಟ ಕ್ಷೇತ್ರದಲ್ಲಿ ಕಳೆದ ಒಂದು ವರ್ಷದಲ್ಲಿ ಕುಡಿಯುವ ನೀರಿನ ಸಮಸ್ಯೆ ಪರಿಹರಿಸಲು ಒಟ್ಟು 150 ಕೊಳವೆ ಬಾವಿಗಳನ್ನು ಕೊರೆಯಲಾಗಿದ್ದು, ಅವುಗಳಲ್ಲಿ 90 ಸಫಲವಾಗಿರುತ್ತವೆ. 68 ಕೊಳವೆ ಬಾವಿಗಳಿಗೆ ಪಂಪು ಮೋಟರ್‌ಗಳನ್ನು ಟಾಸ್ಕ್ ಫೋರ್ಸ್ ಮತ್ತು SDRF/CRFಅನುದಾನದಡಿ ಅಳವಡಿಸಿ, 22 ಪಂಪು ಮೋಟರ್‌ಗಳನ್ನು ಮರುಬಳಕೆ ಮಾಡಿಕೊಳ್ಳಲಾಗಿದೆ ಹಾಗೂ 74 ಕೊಳವೆ ಬಾವಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿದೆ.